## ಶೈಕ್ಷಣಿಕ ಸಂಸ್ಥೆಗಳಲ್ಲಿ ಮಹಿಳೆ– ವಿಚಾರಸಂಕಿರಣ

# ಸಾಮರ್ಥ್ಯ ಗ್ರಹಿಸದೆ ಸಾಧನೆ ಅಸಾಧ್ಯ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ಹೇರಳ ಅವಕಾಶಗಳಿದ್ದರೂ ಮಹಿಳೆಗೆ ತುಂಬಾ ಉನ್ನತ ಸಾಧನೆ ಮಾಡಲು ಆಗುತ್ತಿಲ್ಲ. ಸ್ವ-ಸಾಮರ್ಥ್ಯವನ್ನು ಅರಿತುಕೊಳ್ಳದಿರುವುದೇ ಇದಕ್ಕೆ ಕಾರಣ' ಎಂದು ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ (ಮೈಸೂರು) ವಿಶ್ರಾಂತ ಕುಲಪತಿ ಕೆ.ಸುಧಾರಾವ್ ಹೇಳಿದರು.

ಬ್ಯಾಟರಾಯನಪುರ ಕ್ಷೇತ್ರವ್ಯಾಪ್ತಿಯ ಹೆಬ್ಬಾಳ ಕೆಂಪಾಪುರದ ಸಿಂಧಿ ವಾಣಿಜ್ಯ ಕಾಲೇಜಿನ ಮಹಿಳಾ ಸಬಲೀಕರಣ ವಿಭಾಗದ ವತಿಯಿಂದ ಆಯೋಜಿಸಿದ್ದ 'ಶೈಕ್ಷಣಿಕ ಸಂಸ್ಥೆಗಳಲ್ಲಿ ಮಹಿಳೆ– ಅವಕಾಶಗಳು, ಸವಾಲುಗಳು ಮತ್ತು ನಿರ್ಬಂಧಗಳು' ಕುರಿತ ರಾಷ್ಟ್ರೀಯ ವಿಚಾರಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ಹೆಣ್ಣುಮಕ್ಕಳು ಕೇವಲ ಸಂಬಳಕ್ಕಾಗಿ ಕೆಲಸಕ್ಕೆ ಸೇರಿಕೊಳ್ಳದೆ ಸಕಾರಾತ್ಮಕ ಗುಣಗಳ ಬೆಳವಣಿಗೆಗಾಗಿ ಕಾರ್ಯನಿರ್ವಹಿಸಬೇಕು. ಪ್ರಾಥಮಿಕ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಕರಿಗಿಂತ ಶಿಕ್ಷಕಿಯರ ಸಂಖ್ಯೆಯೇ ಹೆಚ್ಚು. ಉನ್ನತ ಶಿಕ್ಷಣದಲ್ಲಿ ಮಹಿಳೆ ಹೆಚ್ಚಿನ ಸಾಧನೆ ಮಾಡಬೇಕಾಗಿದೆ' ಎಂದು ತಿಳಿಸಿದರು.

ರಾಮನ್ ಸಂಶೋಧನಾ ಸಂಸ್ಥೆಯ ವಿಜ್ಞಾನಿ ಬಿ.ಆರ್.ಮೀರಾ ಅವರು, ವೇದ–ಪುರಾಣಗಳ ಕಾಲದಲ್ಲಿ ಯಜ್ಞವಲ್ಕನ ಪತ್ನಿ ಮೈತ್ರೇಯಿ, ಹನ್ನೆರಡನೇ ಶತಮಾನದಲ್ಲಿ ಅಕ್ಕಮಹಾದೇವಿ ಅವರು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದರು.

